# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **104 (186)** |
| **ಸದಸ್ಯರ ಹೆಸರು** | : | ಶ್ರೀ ಎಂ. ನಾರಾಯಣಸ್ವಾಮಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : | **01-02-2021** |
| **ಉತ್ತರಿಸುವ ಸಚಿವರು** | : | ಮಾನ್ಯ ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬಿಳಿಗಿರಿರಂಗನಬೆಟ್ಟ ಮೀಸಲು ಅರಣ್ಯ ಪ್ರದೇಶದಲ್ಲಿ ಅನಧಿಕೃತ ಹೋಂ ಸ್ಟೇಗಳು ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ. ಇದನ್ನು ತೆರವುಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ: | ಬಿಆರ್‌ಟಿ ಮೀಸಲು ಅರಣ್ಯ ಪ್ರದೇಶದಲ್ಲಿ ಇರುವ ಬಿಳಿಗಿರಿರಂಗನಬೆಟ್ಟ Enclosure ಗ್ರಾಮವಾಗಿದ್ದು, ಸದರಿ ಪ್ರದೇಶದ ಒಳಗಡೆ ಅನಧಿಕೃತ ಹೋಂ ಸ್ಟೇಗಳ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಸದರಿ ಹೋಂ ಸ್ಟೇಗಳು ಮೀಸಲು ಪ್ರದೇಶದ ಒಳಗಡೆ ಬರುತ್ತದೆಯೇ ಇಲ್ಲವೇ ಎಂಬುದರ ಬಗ್ಗೆ ಮೀಸಲು ಅರಣ್ಯ ಪ್ರದೇಶದ ಮತ್ತು Enclosure ಗ್ರಾಮದ ಗಡಿ ಗುರುತಿಸುವ ಸಂಬಂಧ ಈಗ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ಜಂಟಿ ಮೋಜಣಿ ಕಾರ್ಯ ಕೈಗೊಳ್ಳಲಾಗಿರುತ್ತದೆ ಹಾಗೂ ಬಿಆರ್‌ಟಿ Enclosure ಪ್ರದೇಶದಲ್ಲಿ ಅನಧಿಕೃತವಾಗಿ ನಿರ್ಮಾಣವಾಗಿರುವ ಹೋಂ ಸ್ಟೇಗಳನ್ನು ತೆರವುಗೊಳಿಸುವ ಸಂಬಂಧ ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರಿಗೆ ನಿಯಮಾನುಸಾರ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. |
| ಆ) | ಈ ಅನಧಿಕೃತ ಹೋಂ ಸ್ಟೇಗಳ ನಿರ್ಮಾಣದಲ್ಲಿ ಅಧಿಕಾರಿಗಳು ಶಾಮೀಲಾಗಿರುವುದು ನಿಜವೇ; ಇವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ: | ಅನಧಿಕೃತ ಹೋಂ ಸ್ಟೇಗಳ ನಿರ್ಮಾಣದಲ್ಲಿ ಅರಣ್ಯ ಇಲಾಖೆಯ ಅಧಿಕಾರಿಗಳು ಶಾಮೀಲಾಗಿರುವುದಿಲ್ಲ. |
| ಇ) | ಇದೇ ರೀತಿ ಹಲವಾರು ಜಿಲ್ಲೆಗಳಲ್ಲಿ ಇರುವ ಅನಧಿಕೃತ ಹೋಂ ಸ್ಟೇಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಸರ್ಕಾರದ ಹಂತದಲ್ಲಿ ಪ್ರವಾಸೋದ್ಯಮ ಇಲಾಖಾವತಿಯಿಂದ ಹೋಂ ಸ್ಟೇ/ ರೆಸಾರ್ಟ್ ನೊಂದಣಿಗೆ ಅವಕಾಶ ಕಲ್ಪಿಸಿದ್ದು, ಹೋಂ ಸ್ಟೇ/ರೆಸಾರ್ಟ್ ನೋಂದಣಿಗಾಗಿ ಸಂಬಂಧಿಸಿದ ಜಿಲ್ಲಾಧಿಕಾರಿಗಳು ಸಕ್ಷಮ ಪ್ರಾಧಿಕಾರಿಗಳಾಗಿರುತ್ತಾರೆ. ಈ ಸಂಬಂಧ ಸರ್ಕಾರಿ ಆದೇಶ ಸಂಖ್ಯೆ: ಪ್ರಇ 201 ಪ್ರವಾಯೋ 2016, ದಿನಾಂಕ:13.10.2016ರ ಮೂಲಕ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.<br>ಈ ಮಾರ್ಗಸೂಚಿಗಳಲ್ಲಿನ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ, ಸಕ್ಷಮ ಪ್ರಾಧಿಕಾರವಾದ ಸಂಬಂಧಿಸಿದ ಜಿಲ್ಲಾಧಿಕಾರಿಗಳು ನಿಯಮಾನುಸಾರ ಸೂಕ್ತ ಕ್ರಮವಹಿಸುತ್ತಾರೆ. |

**ಸಂಖ್ಯೆ: ಅಪಜೀ 06 ಎಫ್‌ಜಿಎಲ್ 2021**

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

| | | |
|---|---|---|
| | | ಲೆಕ್ಕಾಚಾರ ಇಲಾಖೆಗಳಲ್ಲಿ ಇನ್ನು ಆಗಿರುವುದಿಲ್ಲ.ಹಾಗೆಯೇ ನಿವೃತ್ತಿ ಸೌಲಭ್ಯಗಳ ಒಟ್ಟಾರೆ ಆರ್ಥಿಕ ಹೊರೆ ರೂ.1637.61ಕೋಟಿ ಗಳಾಗಿದ್ದು.ಇದರ ವರ್ಷವಾರು ಆರ್ಥಿಕ ಹೊರೆ ಸಹ ಲೆಕ್ಕಹಾಕಿರುವುದಿಲ್ಲ.ಈ ಎರಡೂ ಮೊತ್ತಗಳ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ.<br>ಅನುದಾನರಹಿತ ಸೇವಾವಧಿಯ ಸಂಬಂಧ ನೀಡಬೇಕಾದ ವೇತನ ಬಾಕಿ ಮೊತ್ತ ರೂ.3083.54 ಕೋಟಿಗಳೆಂದು ಅಂದಾಜಿಸಲಾಗಿದೆ.<br>ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಸಮಿತಿಯ ಶಿಫಾರಸ್ಸುಗಳನ್ನು ಜಾರಿಗೆ ತರುವಲ್ಲಿ ನಿರ್ದಿಷ್ಟ ನಿಲುವನ್ನು ತಳೆಯಲು ಸರ್ಕಾರಕ್ಕೆ ಸಾಧ್ಯವಾಗಿರುವುದಿಲ್ಲ. |

ಸಂಖ್ಯೆ:ಇಪಿ 42 ಎಸ್‌ಇಎಸ್ 2021

(ಎಸ್.ಸುರೇಶ್‌ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು